RNU AIR DHARWAD

# MAY 7, 2026
# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಸಂಪತ್ತು ಮತ್ತು ಅಧಿಕಾರ ಸಮಾನವಾಗಿ ಹಂಚಿಕೆಯಾದಾಗಲೇ ಸಾಮಾಜಿಕ ನ್ಯಾಯದ ಪರಿಕಲ್ಪನೆ ಸಾಕಾರ– ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ.

- ಪದವಿ ಶಿಕ್ಷಣದ ಅಂತ್ಯವಲ್ಲ, ಜವಾಬ್ದಾರಿಯುತ ಬದುಕಿನ ಆರಂಭ– ವಿದ್ಯಾರ್ಥಿಗಳಿಗೆ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಕಿವಿಮಾತು.

- ದಕ್ಷಿಣ ಕನ್ನಡ ಜಿಲ್ಲೆ 'ಕಡಂದಲೆ 400 ಕೆವಿ ವಿದ್ಯುತ್ ಉಪಕೇಂದ್ರ' ಕಾಮಗಾರಿ ಜುಲೈ 15 ರೊಳಗೆ ಪೂರ್ಣ– ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕರಿಂದ ಮಾಹಿತಿ.

- ಶತಮಾನ ಕಂಡ ಸರ್ಕಾರಿ ಶಾಲೆಗಳು ಪಾರಂಪರಿಕ ಶಾಲೆಗಳಾಗಿ ಪರಿವರ್ತನೆ–ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರು ೋತ್ತಮ ಬಿಳಿಮಲೆ ಹೇಳಿಕೆ.

ಈಗ ವಾರ್ತೆಗಳ ವಿವರ

*******

ಸಂಪತ್ತು ಮತ್ತು ಅಧಿಕಾರ ಎಲ್ಲರಿಗೂ ಸಮಾನವಾಗಿ ಹಂಚಿಕೆಯಾಗಬೇಕು. ಅಂದಾಗಲೇ ಸಾಮಾಜಿಕ ನ್ಯಾಯದ ಪರಿಕಲ್ಪನೆ ಸಾಕಾರವಾಗಲು ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮೈಸೂರಿನಲ್ಲಿ ಆಯೋಜನೆಗೊಂಡಿದ್ದ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಎಲ್ಲರಿಗೂ ಸಮಪಾಲು, ಸಮಬಾಳು ದೊರೆಯಬೇಕು ಎನ್ನುವುದು ಸರ್ಕಾರದ ಆಶಯ. ಅವಕಾಶ ವಂಚಿತ ಎಲ್ಲ ಸಮುದಾಯಗಳಿಗೂ ಸಮಾನ ಅವಕಾಶಗಳು ದೊರೆಯುವಂತಾಗಬೇಕು ಎನ್ನುವುದು ಸಂಕಲ್ಪ. ಸಾಮಾಜಿಕ ನ್ಯಾಯಕ್ಕೆ ಸರ್ಕಾರ ಬದ್ಧವಾಗಿದೆ ಎಂದರು. ಸಮಾಜದಲ್ಲಿ ಜಾತಿ ವ್ಯವಸ್ಥೆ ಹೋಗಲಾಡಿಸಲು ಪ್ರತಿಯೊಬ್ಬರಿಗೂ ಶಿಕ್ಷಣ ದೊರೆಯಬೇಕು ಅಂದಾಗ ಮಾತ್ರ ಅವರು ರಾಜಕೀಯವಾಗಿ, ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಮುಂದುವರಿಯಲು ಸಾಧ್ಯ ಎಂದು ಮುಖ್ಯಮಂತ್ರಿ ಹೇಳಿದರು.

*******

ಪೊಲೀಸರಿಗೆ ಸುಸಜ್ಜಿತ ವಸತಿ ಗೃಹಗಳನ್ನು ಕಲ್ಪಿಸುವ ಕಾರ್ಯಕ್ರಮ ಮುಂದುವರೆದಿದ್ದು, ಶೇಕಡ 40 ರಷ್ಟು ವಸತಿ ಗೃಹಗಳ ನಿರ್ಮಾಣ ಕಾರ್ಯ ಪೂರ್ಣಗೊಂಡಿದೆ ಎಂದು ಗೃಹ ಸಚಿವ ಡಾಕ್ಟರ್ ಜಿ.ಪರಮೇಶ್ವರ, ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಶೇಕಡ 80 ರಷ್ಟು ವಸತಿ ಗೃಹಗಳನ್ನು ನಿರ್ಮಿಸುವ ಗುರಿ ಹೊಂದಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಕಾರ್ಯೋನ್ಮುಖವಾಗಿದೆ ಎಂದರು. ರಾಜ್ಯದಲ್ಲಿರುವ ಪೊಲೀಸ್ ಠಾಣೆಗಳ ಹಳೆ ಕಟ್ಟಡಗಳ ಬದಲಿಗೆ, ಹೊಸ ಕಟ್ಟಡಗಳನ್ನು ನಿರ್ಮಾಣ ಮಾಡುವ ಉದ್ದೇಶ ಹೊಂದಲಾಗಿದೆ ಈಗಾಗಲೇ ಬಹುತೇಕ ಪೊಲೀಸ್ ಠಾಣೆಗಳ ಹಳೆಯ ಕಟ್ಟಡಗಳನ್ನು ಕೆಡವಿ, ಹೊಸದಾಗಿ ನಿರ್ಮಿಸಲಾಗಿದೆ. ಇನ್ನಷ್ಟು ಹಳೆಯ ಕಟ್ಟಡಗಳನ್ನು ಗುರುತಿಸಲಾಗಿದ್ದು, ಅವುಗಳನ್ನು ಕೆಡವಿ, ಹೊಸದಾಗಿ ನಿರ್ಮಾಣ ಮಾಡಲಾಗುವುದು. ಇದಕ್ಕಾಗಿ ಅನುದಾನದ ಅಗತ್ಯವಿದೆ ಎಂದು ಸಚಿವರು ಹೇಳಿದರು.

*******

ಕಾರವಾರ ಜಿಲ್ಲೆಯ ಯಾವುದೇ ಭಾಗದಲ್ಲಿ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಅಧಿಕಾರಿಗಳು ಅಗತ್ಯ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಉತ್ತರಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕುಮಟಾ ಉಪ ವಿಭಾಗಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಕುಡಿಯುವ ನೀರಿನ ಸಮಸ್ಯೆ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೀರಿನ ಸಮಸ್ಯೆಯ ದೂರುಗಳಿಗೆ ತಕ್ಷಣವೇ ಸೂಕ್ತ ರೀತಿಯಲ್ಲಿ ಸ್ಪಂದಿಸಬೇಕು. ಕುಡಿಯುವ ನೀರಿನ ಮೂಲಗಳು ಇಲ್ಲದಿರುವ ಕಡೆ ಟ್ಯಾಂಕರ್ ಮೂಲಕ ನೀರು ಒದಗಿಸಬೇಕು ಎಂದು ನಿರ್ದೇಶನ ನೀಡಿದರು. ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದಂತೆ ಅನುದಾನದ ಕೊರತೆಯಿಲ್ಲ, ಜಿಲ್ಲೆಯ ಎಲ್ಲಾ ತಾಲೂಕಿಗೆ 25 ಲಕ್ಷ ಅನುದಾನ ಹಂಚಿಕೆಯಾಗಿದ್ದು, ಜಿಲ್ಲೆಗೆ ಇನ್ನೂ 3 ಕೋಟಿ ರೂಪಾಯಿ ಹೆಚ್ಚುವರಿ ಅನುದಾನ ಬರಲಿದೆ ಎಂದು ಸಚಿವರು ಹೇಳಿದರು.

*******

ರಾಸುಗಳ ಆರೋಗ್ಯದ ದೃಷ್ಟಿಯಿಂದ ಪ್ರತಿಯೊಬ್ಬ ರೈತರು ತಮ್ಮ ಜಾನುವಾರುಗಳಿಗೆ ಕಾಲುಬಾಯಿ ಲಸಿಕೆ ಹಾಕಿಸಬೇಕು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ ಎಚ್ ಮುನಿಯಪ್ಪ ಮನವಿ ಮಾಡಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದಲ್ಲಿ ಕಾಲುಬಾಯಿ ಲಸಿಕೆ ಪೋಸ್ಟರ್ ಬಿಡುಗಡೆ ಮಾಡಿ ಮಾತನಾಡಿದ ಅವರು, ಕಳೆದ ಎರಡು ಮೂರು ವ ೯ಗಳಿಂದ ಹಸುಗಳಲ್ಲಿ ಕಾಲುಬಾಯಿ ರೋಗ ಕಂಡುಬಂದಿಲ್ಲ. ಆದರೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕಾಲುಬಾಯಿ ಲಸಿಕೆಯನ್ನು ಪರಿಣಾಮಕಾರಿಯಾಗಿ ಹಾಕುವ ಕೆಲಸ ಆಗಬೇಕು ಎಂದರು. ಬೇಸಿಗೆ ಇರುವುದರಿಂದ ರಾಸುಗಳಿಗೆ ಮೇವಿನ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಇನ್ನು 35 ವಾರಕ್ಕೆ ಆಗುವ ಟ್ಟ ಮೇವು ಜಿಲ್ಲೆಯಲ್ಲಿ ಸಂಗ್ರಹವಾಗಿದೆ. ರಾಸುಗಳ ಮತ್ತು ಹೈನುಗಾರಿಕೆ ಉತ್ಪಾದನೆ ಹೆಚ್ಚಿಸುವ ಕುರಿತು ಇಲಾಖೆಯಿಂದ ಕಾಲ ಕಾಲಕ್ಕೆ ರೈತರಿಗೆ ಮಾಹಿತಿ ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

*******

ಪದವಿ ಪಡೆಯುವುದು ಶಿಕ್ಷಣದ ಅಂತ್ಯವಲ್ಲ, ಬದಲಾಗಿ ಜವಾಬ್ದಾರಿಯುತ ಬದುಕಿನ ಆರಂಭ ಎಂದು ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಅಭಿಪ್ರಾಯಪಟ್ಟಿದ್ದಾರೆ. ಕುವೆಂಪು ವಿಶ್ವವಿದ್ಯಾಲಯದ 35 ನೇ ಘಟಿಕೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವಿದ್ಯಾರ್ಥಿಗಳು ವಿಮರ್ಶಾತ್ಮಕ ಚಿಂತನೆ ಮತ್ತು ಸೃಜನಶೀಲತೆ ಬೆಳೆಸಿಕೊಳ್ಳಬೇಕು. ಶಿಕ್ಷಣ ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನು ತಲುಪಿದಾಗ ಮಾತ್ರ ಅದು ಸಾರ್ಥಕವಾಗುತ್ತದೆ ಎಂದರು. ಶಿಕ್ಷಣ ಸಂಸ್ಥೆಗಳಲ್ಲಿ ಪಡೆಯುವ ಪದವಿ ಕೇವಲ ಜ್ಞಾನದ ಸಂಕೇತವಲ್ಲ, ಸಮಾಜಕ್ಕೆ ಉತ್ತಮ ದಿಕ್ಕು ನೀಡಬಲ್ಲ ಸಾಮರ್ಥ್ಯದ ಪ್ರತೀಕ. ಜ್ಞಾನ ದೇಗುಲದಿಂದ ಹೊರಬಂದು ಕರ್ಮಕ್ಷೇತ್ರ ಪ್ರವೇಶಿಸುತ್ತಿರುವ ನಿಮಗೆ ಶಿಕ್ಷಣ ಜೀವನ ಸಾರ್ಥಕಗೊಳಿಸಲು ಸಹಕಾರಿಯಾಗಲಿದೆ ಎಂದು ರಾಜ್ಯಪಾಲರು ಹೇಳಿದರು. ಘಟಿಕೋತ್ಸವದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಕೋಣಂದೂರು ಲಿಂಗಪ್ಪ, ರಂಗಕರ್ಮಿ ಕೆ.ವಿ.ಅಕ್ಷರ ಹಾಗೂ ಶಿಕ್ಷಣ ತಜ್ಞ ಪ್ರೊ.ಎಚ್.ಎ.ರಂಗನಾಥ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಲಾಯಿತು.

*******

ಮೈಸೂರು ದಸರಾ ಸಂದರ್ಭದಲ್ಲಿ ನಾಡ ದೇವತೆ ಚಾಮುಂಡೇಶ್ವರಿ ದೇವಿಯನ್ನು ಹೊತ್ತು ಮೆರೆಸುತ್ತಿದ್ದ ಅರ್ಜುನ ಆನೆಯ ಸ್ಮಾರಕವನ್ನು ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ ದಬ್ಬಳ್ಳಿಕಟ್ಟೆ ಮೀಸಲು ಅರಣ್ಯ ಪ್ರದೇಶದಲ್ಲಿ ಅರಣ್ಯ ಸಚಿವ ಈಶ್ವರ್ ಖಂಡ್ರೆ ಲೋಕರ್ಪಣೆಗೊಳಿಸಿದರು. 2023 ರ ಡಿಸೆಂಬರ್ 4 ರಂದು ಕಾಡಾನೆ ಸೆರೆ ಹಿಡಿಯುವ ಕಾರ್ಯಾಚರಣೆ ವೇಳೆ ಮದಗಜದೊಂದಿಗೆ ಕಾದಾಡಿ ವೀರ ಮರಣವನ್ನಪ್ಪಿದ್ದ ಅರ್ಜುನ ಆನೆಯ ಮೃತದೇಹವನ್ನು ಅದೇ ಸ್ಥಳದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಗಿತ್ತು.

*******

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–42 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ದೇಶದಲ್ಲಿ ಅಡುಗೆ ಅನಿಲ ಹಾಗೂ ಪೆಟ್ರೋಲ್, ಡೀಸೆಲ್ ಪೂರೈಕೆ ಸುಗಮವಾಗಿ ನಡೆಯುತ್ತಿದೆ ಎಂದು, ಕೇಂದ್ರ ಸರ್ಕಾರ ತಿಳಿಸಿದೆ. ದೆಹಲಿಯಲ್ಲಿಂದು ಅಂತರ್‌ಸಚಿವಾಲಯ ಸುದ್ದಿಗೋಷ್ಠಿಯಲ್ಲಿ, ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ ಮಾತನಾಡಿ ಪಶ್ಚಿಮ ಏಷ್ಯಾದಲ್ಲಿನ ಬಿಕ್ಕಟ್ಟಿನಿಂದ, ಪೆಟ್ರೋಲಿಯಂ ಉತ್ಪನ್ನಗಳ ಆಮದಿಗೆ ಅಡಚಣೆಯಾಗಿತ್ತು. ಆದರೂ, ಸರ್ಕಾರ ಶೇಕಡ 100 ರಷ್ಟು ಪ್ರಮಾಣದಲ್ಲಿ ಗ್ರಾಹಕರಿಗೆ ಗೃಹಬಳಕೆ ಅಡುಗೆ ಅನಿಲ ಪೂರೈಸಲು ಎಲ್ಲಾ ರೀತಿಯ ಕ್ರಮಗಳನ್ನು ತೆಗೆದುಕೊಂಡಿದೆ ಎಂದರು. ವಾಣಿಜ್ಯ ಅಡುಗೆ ಅನಿಲ ದರ ಏರಿಕೆಯಾಗಿದ್ದು, ಗೃಹಬಳಕೆ ಅಡುಗೆ ಅನಿಲ, ಪೆಟ್ರೋಲ್, ಡೀಸೆಲ್ ದರ ಏರಿಕೆಯಾಗಿಲ್ಲ. ಹೊಸ ಪೈಪ್ ಮೂಲಕ, ನೈಸರ್ಗಿಕ

ಅನಿಲ ಪೂರೈಕೆ ಸಂಪರ್ಕಗಳನ್ನು ಒದಗಿಸಲಾಗುತ್ತಿದೆ. ದೇಶದಲ್ಲಿ ಕಚ್ಚಾತೈಲ ಶುದ್ಧೀಕರಣ ಘಟಕಗಳು ಸಾಮಾನ್ಯವಾಗಿ ಕಾರ್ಯ ನಿರ್ವಹಿಸುತ್ತಿವೆ ಎಂದು ಅವರು ಹೇಳಿದರು.

*******

ದಕ್ಷಿಣ ಕನ್ನಡ, ಉಡುಪಿ ಸೇರಿದಂತೆ ಕರಾವಳಿ ಭಾಗದ ಜಿಲ್ಲೆಗಳಿಗೆ ಉತ್ತಮ ಗುಣಮಟ್ಟದ ವಿದ್ಯುತ್ ಸೌಲಭ್ಯ ಒದಗಿಸುವ 'ಕಡಂದಲೆ 400 ಕೆವಿ ವಿದ್ಯುತ್ ಉಪಕೇಂದ್ರ' ಕಾಮಗಾರಿ ಜುಲೈ 15 ರೊಳಗೆ ಪೂರ್ಣಗೊಳಿಸಲಾಗುವುದು ಎಂದು ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಡಾ.ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಭೂ ವ್ಯಾಜ್ಯದ ಕಾರಣದಿಂದಾಗಿ ಕಳೆದ ಮೂರು ವ ‍ ್ಗಳಿಂದ ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದಿರೆ ತಾಲೂಕಿನ ಕಡಂದಲೆ ಗ್ರಾಮದಲ್ಲಿ 400 ಕೆವಿ ಲೈನ್ ಕಾಮಗಾರಿ ಸ್ಥಗಿತಗೊಂಡಿತ್ತು. ಮಂಗಳೂರು ರಾಜ್ಯದ ಪ್ರಮುಖ ಕೈಗಾರಿಕಾ ಕೇಂದ್ರವಾಗಿದ್ದು, ತಡೆರಹಿತ ವಿದ್ಯುತ್ ಪೂರೈಕೆ ಅತ್ಯಗತ್ಯವಾಗಿದೆ. ಇಂಧನ ಸಚಿವರ ನಿರ್ದೇಶನದಂತೆ ಮುಂಬರುವ ಮುಂಗಾರಿನೊಳಗೆ ಈ ಯೋಜನೆ ಪೂರ್ಣಗೊಳಿಸಿ ವಿದ್ಯುತ್ ಪ್ರಸರಣ ಕಾರ್ಯ ಆರಂಭಿಸಲಾಗುವುದು ಎಂದು ಅವರು ಹೇಳಿದರು.

*******

ಶತಮಾನ ಕಂಡ ಸರ್ಕಾರಿ ಶಾಲೆಗಳನ್ನು ಪಾರಂಪರಿಕ ಶಾಲೆಗಳನ್ನಾಗಿ ಪರಿವರ್ತಿಸುವ ಉದ್ದೇಶವಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರು ೋತ್ತಮ ಬಿಳಿಮಲೆ ತಿಳಿಸಿದ್ದಾರೆ. ಚಾಮರಾಜನಗರದ ಧೀನಬಂಧು ಸಂಸ್ಥೆಯಲ್ಲಿ 2019-20 ರಲ್ಲಿ ಇಂಗ್ಲೀ ್ ಮಾಧ್ಯಮಕ್ಕೆ ಪರಿವರ್ತನೆಗೊಂಡ ಶಾಲೆಗಳ ಪ್ರಸ್ತುತ 6 ಮತ್ತು 7ನೇ ತರಗತಿ ವಿದ್ಯಾರ್ಥಿಗಳ ಇಂಗ್ಲೀ ್ ಭಾ ಾ ಪ್ರಾವಿಣ್ಯತೆ ಅಧ್ಯಯನ ಸಂಬಂಧ ವರದಿ ಸ್ವೀಕರಿಸಿ ಮಾತನಾಡಿದ ಅವರು, ರಾಜ್ಯದಲ್ಲಿ 3139 ಶತಮಾನ ಕಂಡ ಸರ್ಕಾರಿ ಶಾಲೆಗಳಿದ್ದು, ಈ ಪೈಕಿ ಪ್ರಥಮ ಹಂತದಲ್ಲಿ 31 ಶಾಲೆಗಳನ್ನು ಪಾರಂಪರಿಕ ಶಾಲೆಗಳನ್ನಾಗಿ ಪರಿವರ್ತಿಸುವ ಉದ್ದೇಶ ಹೊಂದಲಾಗಿದೆ ಎಂದರು. ರಾ ್ಟ್ರ ನಾಯಕರು ಭೇಟಿ ನೀಡಿದ, ಖ್ಯಾತ ಕವಿಗಳು, ಎಂಜಿನಿಯರ್‌ಗಳು, ವಿಜ್ಞಾನಿಗಳು ವ್ಯಾಸಂಗ ಮಾಡಿದ ಶಾಲೆಗಳನ್ನು ಆಯ್ಕೆ ಮಾಡಿಕೊಂಡು ಪಾರಂಪಾರಿಕ ಶಾಲೆಗಳನ್ನಾಗಿ ಪರಿವರ್ತಿಸಿ, ಯೋಜನೆಯನ್ನು ಹಂತ ಹಂತವಾಗಿ ಉಳಿದ ಶಾಲೆಗಳಿಗೂ ವಿಸ್ತರಿಸುವ ಯೋಜನೆ ರೂಪಿಸಲಾಗಿದೆ ಎಂದು ಅವರು ಹೇಳಿದರು.

*******

ದಾವಣಗೆರೆ ಜಿಲ್ಲೆಯಲ್ಲಿರುವ ಅನಧಿಕೃತ ಹೋಮ್ ಸ್ಟೇಗಳಿಗೆ ಕಡಿವಾಣ ಹಾಕಲು ಪ್ರವಾಸೋದ್ಯಮ ಇಲಾಖೆ ಮುಂದಾಗಿದ್ದು, ಜಿಲ್ಲೆಯ ಎಲ್ಲಾ ಹೋಮ್ ಸ್ಟೇಗಳು ಇಲಾಖೆಯಡಿ ನೋಂದಣಿ ಮಾಡಿಕೊಳ್ಳುವುದನ್ನು ಕಡ್ಡಾಯಗೊಳಿಸಿ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕಿ ಕಾವ್ಯ ಆದೇಶ ಹೊರಡಿಸಿದ್ದಾರೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಸಂಪತ್ತು ಮತ್ತು ಅಧಿಕಾರ ಸಮಾನವಾಗಿ ಹಂಚಿಕೆಯಾದಾಗಲೇ ಸಾಮಾಜಿಕ ನ್ಯಾಯದ ಪರಿಕಲ್ಪನೆ ಸಾಕಾರ–ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಮತ.

ಪದವಿ ಶಿಕ್ಷಣದ ಅಂತ್ಯವಲ್ಲ, ಜವಾಬ್ದಾರಿಯುತ ಬದುಕಿನ ಆರಂಭ– ವಿದ್ಯಾರ್ಥಿಗಳಿಗೆ ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಕಿವಿಮಾತು.

ದಕ್ಷಿಣ ಕನ್ನಡ ಜಿಲ್ಲೆ 'ಕಡಂದಲೆ 400 ಕೆವಿ ವಿದ್ಯುತ್ ಉಪಕೇಂದ್ರ' ಕಾಮಗಾರಿ ಜುಲೈ 15 ರೊಳಗೆ ಪೂರ್ಣ–ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕರಿಂದ ಮಾಹಿತಿ.

ಶತಮಾನ ಕಂಡ ಸರ್ಕಾರಿ ಶಾಲೆಗಳು ಪಾರಂಪರಿಕ ಶಾಲೆಗಳಾಗಿ ಪರಿವರ್ತನೆ–ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರು ೋತ್ತಮ ಬಿಳಿಮಲೆ ಹೇಳಿಕೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

********